# ಕರ್ನಾಟಕ ಸರ್ಕಾರ

**ಸಂಖ್ಯೆ: HD 178 PCC 2025**

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ:17.11.2025.

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಿಸಿಎಎಸ್)
ಒಳಾಡಳಿತ ಇಲಾಖೆ,
ವಿಧಾನ ಸೌಧ, ಬೆಂಗಳೂರು.

**"ಅತೀ ಜರೂರು"**

**ಇವರಿಗೆ:**
ಮಹಾನಿರ್ದೇಶಕರು ಮತ್ತು
ಆರಕ್ಷಕ ಮಹಾನಿರೀಕ್ಷಕರು ಕರ್ನಾಟಕ,
ನೃಪತುಂಗ ರಸ್ತೆ, ಬೆಂಗಳೂರು.

**ಮಾನ್ಯರೇ,**

**ವಿಷಯ:** ನವೆಂಬರ್ ತಿಂಗಳನ್ನು 'ಮಕ್ಕಳ ಮಾಸ'ವೆಂದು ಘೋಷಿಸುವ ಬಗ್ಗೆ.

**ಉಲ್ಲೇಖ:** ಡಾ. ತಿಪ್ಪೇಸ್ವಾಮಿ ಕೆ.ಟಿ, ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ರವರ ಪತ್ರ ದಿನಾಂಕ:08.10.2025

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಪ್ರತೀ ವರ್ಷ ನವೆಂಬರ್ 14 ರಂದು ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಆ ದಿನ ಮಕ್ಕಳ ಕುರಿತು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಇತ್ತೀಚೆಗೆ ಮಕ್ಕಳ ಮೇಲಿನ ದೌರ್ಜನ್ಯಗಳು, ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳ ಗರ್ಭಧಾರಣೆ ಪ್ರಕರಣಗಳು, ಪೋಕ್ಸೋ ಪ್ರಕರಣಗಳು ಹಾಗೂ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚುತ್ತಿವೆ. ಈ ನಿಟ್ಟಿನಲ್ಲಿ ನವೆಂಬರ್ ತಿಂಗಳನ್ನು ಮಕ್ಕಳ ಮಾಸವೆಂದು ಘೋಷಿಸಿ ಮಕ್ಕಳ ಹಕ್ಕುಗಳ ರಕ್ಷಣೆಗೆ ವಿಶೇಷ ಆದ್ಯತೆ ವಹಿಸುವುದು ತುರ್ತು ಅಗತ್ಯವಾಗಿದೆ. **ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳು, ಮಕ್ಕಳ ಸ್ನೇಹಿ ಗ್ರಾಮ ಪಂಚಾಯ್ತಿ ಅಭಿಯಾನ, ಬಾಲ ಕಾರ್ಮಿಕರು ಹಾಗೂ ಶಾಲೆ ಬಿಟ್ಟ ಮಕ್ಕಳ ಗುರುತಿಸುವಿಕೆ ಮತ್ತು ರಕ್ಷಣೆ, ಮಕ್ಕಳ ರಕ್ಷಣಾ ಸಮಿತಿಗಳ ಬಲವರ್ಧನೆ, ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ-2016 ಮತ್ತು ತೆರೆದ ಮನೆ ಕಾರ್ಯಕ್ರಮದ ಅನುಷ್ಠಾನ, ಅನಾಥ ಹಾಗೂ ಸಂಕಷ್ಟದಲ್ಲಿನ ಮಕ್ಕಳ ಗುರುತಿಸುವಿಕೆ, ಮಕ್ಕಳ ಸಹಾಯವಾಣಿ ಹಾಗೂ ದತ್ತು ಕಾರ್ಯಕ್ರಮದ ಪ್ರಚಾರ** ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಇಡೀ ನವೆಂಬರ್ ತಿಂಗಳು ಈ ಕುರಿತು ತಳಮಟ್ಟದಿಂದ ರಾಜ್ಯ ಮಟ್ಟದ ವರೆಗೂ ಕ್ರಿಯಾಯೋಜನೆ ರೂಪಿಸಿಕೊಂಡು ಅನುಷ್ಠಾನ ಮಾಡಿದರೆ ಸಮಾಜದಲ್ಲಿ ವ್ಯಾಪಕವಾದ ಜಾಗೃತಿ ಮೂಡಿ ಮಕ್ಕಳ ಹಕ್ಕುಗಳ ರಕ್ಷಣೆಗೆ ವೇಗ ದೊರೆಯಲಿದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ನವೆಂಬರ್ ತಿಂಗಳನ್ನು ಮಕ್ಕಳ ಮಾಸವೆಂದು ಘೋಷಿಸಿ ಸಂಬಂಧಿಸಿದ ಎಲ್ಲಾ ಇಲಾಖೆಗಳು ಇಡೀ ತಿಂಗಳು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿರುತ್ತಾರೆ.

ಆದ್ದರಿಂದ, ಪೊಲೀಸ್ ಇಲಾಖಾ ವತಿಯಿಂದ ನವೆಂಬರ್ ತಿಂಗಳನ್ನು **'ಮಕ್ಕಳ ಮಾಸ'**ವೆಂದು ಘೋಷಿಸಿ, ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಗತ್ಯ ಕ್ರಮಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

S. Ambika 17/11/2025

(ಎಸ್. ಅಂಬಿಕಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಒಳಾಡಳಿತ ಇಲಾಖೆ(ಅಪರಾಧಗಳು)

17/11

**ಪ್ರತಿಯನ್ನು:**
ಡಾ. ತಿಪ್ಪೇಸ್ವಾಮಿ ಕೆ.ಟಿ, ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, 4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು-560 001.

ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು- 560 001

ದೂರವಾಣಿ ಸಂಖ್ಯೆ: 080-22115290 E-mail: kscpcr@gmail.com

**ಡಾ. ತಿಪ್ಪೇಸ್ವಾಮಿ ಕೆ.ಟಿ.** ಸದಸ್ಯರು E-mail: thippeswamykscpcr@gmail.com

---

ಇವರಿಗೆ ದಿನಾಂಕ: 08-10-2025

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ.

ಮಾನ್ಯರೇ,

ವಿಷಯ: ನವೆಂಬರ್ ತಿಂಗಳನ್ನು 'ಮಕ್ಕಳ ಮಾಸ' ಎಂದು ಘೋಷಿಸುವ ಬಗ್ಗೆ.

ಪ್ರತೀ ವರ್ಷ ನವೆಂಬರ್ 14 ರಂದು ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಆ ದಿನ ಮಕ್ಕಳ ಕುರಿತು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಆದರೆ ಇತ್ತೀಚೆಗೆ ಮಕ್ಕಳ ಮೇಲಿನ ದೌರ್ಜನ್ಯಗಳು, ಅಪ್ರಾಪ್ತ ವಯಸ್ಸಿನ ಹೆಣ್ಣುಮಕ್ಕಳ ಗರ್ಭಧಾರಣೆ ಪ್ರಕರಣಗಳು, ಪೋಕ್ಸೋ ಪ್ರಕರಣಗಳು ಹಾಗೂ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚುತ್ತಿವೆ. ಈ ನಿಟ್ಟಿನಲ್ಲಿ ನವೆಂಬರ್ ತಿಂಗಳನ್ನು ಮಕ್ಕಳ ಮಾಸವೆಂದು ಘೋಷಿಸಿ ಮಕ್ಕಳ ಹಕ್ಕುಗಳ ರಕ್ಷಣೆಗೆ ವಿಶೇಷ ಆದ್ಯತೆ ವಹಿಸುವುದು ತುರ್ತು ಅಗತ್ಯವಾಗಿದೆ. **ಮಕ್ಕಳ ಹಕ್ಕುಗಳ ಗ್ರಾಮ ಸಭೆಗಳು, ಮಕ್ಕಳ ಸ್ನೇಹಿ ಗ್ರಾಮ ಪಂಚಾಯ್ತಿ ಅಭಿಯಾನ, ಬಾಲ ಕಾರ್ಮಿಕರು ಹಾಗೂ ಶಾಲೆ ಬಿಟ್ಟ ಮಕ್ಕಳ ಗುರುತಿಸುವಿಕೆ ಮತ್ತು ರಕ್ಷಣೆ, ಮಕ್ಕಳ ರಕ್ಷಣಾ ಸಮಿತಿಗಳ ಬಲವರ್ಧನೆ, ಶೈಕ್ಷಣಿಕ ಸಂಸ್ಥೆಗಳಲ್ಲಿ ಮಕ್ಕಳ ರಕ್ಷಣಾ ನೀತಿ-2016 ಮತ್ತು ತೆರೆದ ಮನೆ ಕಾರ್ಯಕ್ರಮದ ಅನುಷ್ಠಾನ, ಅನಾಥ ಹಾಗೂ ಸಂಕಷ್ಟದಲ್ಲಿನ ಮಕ್ಕಳ ಗುರುತಿಸುವಿಕೆ, ಮಕ್ಕಳ ಸಹಾಯವಾಣಿ ಹಾಗೂ ದತ್ತು ಕಾರ್ಯಕ್ರಮದ ಪ್ರಚಾರ** ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಸರ್ಕಾರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಇಡೀ ನವೆಂಬರ್ ತಿಂಗಳು ಈ ಕುರಿತು ತಳಮಟ್ಟದಿಂದ ರಾಜ್ಯ ಮಟ್ಟದ ವರೆಗೂ ಕ್ರಿಯಾಯೋಜನೆ ರೂಪಿಸಿಕೊಂಡು ಅನುಷ್ಠಾನ ಮಾಡಿದರೆ ಸಮಾಜದಲ್ಲಿ ವ್ಯಾಪಕವಾದ ಜಾಗೃತಿ ಮೂಡಿ ಮಕ್ಕಳ ಹಕ್ಕುಗಳ ರಕ್ಷಣೆಗೆ ವೇಗ ದೊರೆಯಲಿದೆ.

ಈ ಹಿನ್ನೆಲೆಯಲ್ಲಿ ತಮ್ಮ ಈ ನಿರ್ಧಾರ ಹಾಗೂ ಸಮಾಜಕ್ಕೆ ನೀಡುವ ಒಂದು ಕರೆ ಮಹತ್ವದ ಪರಿಣಾಮ ಬೀರಲಿದೆ ಎಂಬುದು ನನ್ನ ನಂಬಿಕೆ. ಹಾಗಾಗಿ **ನವೆಂಬರ್ ತಿಂಗಳನ್ನು ಮಕ್ಕಳ ಮಾಸವೆಂದು ಘೋಷಿಸಿ** ಸಂಬಂಧಿಸಿದ ಎಲ್ಲಾ ಇಲಾಖೆಗಳು ಇಡೀ ತಿಂಗಳು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸೂಕ್ತ ನಿರ್ದೇಶನ ನೀಡಬೇಕೆಂದು ತಮ್ಮಲ್ಲಿ ವಿನಂತಿಸುತ್ತೇನೆ.

ವಂದನೆಗಳೊಂದಿಗೆ

ತಮ್ಮ ನಂಬುಗೆಯ

(ಡಾ. ತಿಪ್ಪೇಸ್ವಾಮಿ ಕೆ.ಟಿ.)

(ಡಾ. ಶಾಲಿನಿ ರಜನೀಶ್)
[illegible] ಮುಖ್ಯ ಕಾರ್ಯದರ್ಶಿ

ಪ್ರತಿ: ಮಾನ್ಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಕರಾಮಹರಆ ರವರ ಮಾಹಿತಿಗಾಗಿ ಸಲ್ಲಿಸಿದೆ.

ಆಯುಕ್ತ, ಒಳಾಡಳಿತ ಇಲಾಖೆ
ಪ್ರ.ಕಾ. ಪ್ರಾ.ಶಿ ಮತ್ತು ಸಾ.ಶಿ.ಇ / ಕಾರ್ಮಿಕ ಇಲಾಖೆ / ಆ.ಕು.ಕ ಇ
ನಿರ್ದೇಶಕ, ಗ್ರಾ.ಅ ಮತ್ತು ಪಂ.ರಾಜ್ / ಮ ಮತ್ತು ಮ.ಅ.ಇ / ವಾ ಮತ್ತು ವಾ.ಸಂಪರ್ಕ ಇಲಾಖೆ